# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

### ಚೌಡೇಶ್ವರಿ ವಾರ್ಡ್ ನಂ-02ರಲ್ಲಿ

### ದಿನಾಂಕ: 07-05-2022 ರಂದು ನಡೆದ ಸಮಿತಿ ಸಭಾ ನಡವಳಿ.

ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ.ಕೆ.ಎ.ಶಾಂತರಾಜ್ ನೊಡಲ್ ಅಧಿಕಾರಿಗಳು.
2. ಶ್ರೀ.ಚಂದ್ರಕಾಂತ್‌ರಾಜ್ ಪಿ.ಎ ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ. ಶಶಿಕುಮಾರ್ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ.
4. ಶ್ರೀ.ಬಾಬು ರೆಡ್ಡಿ ಸಹಾಯಕ ಅಭಿಯಂತರರು ವಿದ್ಯುತ್.
5. ಶ್ರೀ.ಮಹಾಂತೇಶ್ ಉಜ್ಜನಿಕೊಪ್ಪ ಹಿರಿಯ ಆರೋಗ್ಯ ಪರಿವೀಕ್ಷಕರು.

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

1. ಚೌಡೇಶ್ವರಿ ವಾರ್ಡ್ ನಂ-02ರ ವ್ಯಾಪ್ತಿಯಲ್ಲಿ ಪುಟ್ಟೇನಹಳ್ಳಿ ಕೆ.ಹೆಚ್.ಬಿ ಕಾಲೋನಿಯಲ್ಲಿನ ರಸ್ತೆಗಳಲ್ಲಿ ತುಂಬಿರುವ ಹೂಳನ್ನು ತೆಗೆಯುವಂತೆ ಸಭೆಯಲ್ಲಿ ಸಾರ್ವಜನಿಕರು ಕೋರಿದರು.

2. ಚೌಡೇಶ್ವರಿ ವಾರ್ಡ್ ನಂ-02ರ ವ್ಯಾಪ್ತಿಯಲ್ಲಿರುವ ಪ್ರದೇಶಗಳಲ್ಲಿ ಕಸ ನಿರ್ವಹಣೆಯನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಸಭೆಯಲ್ಲಿ ನೊಡೆಲ್ ಅಧಿಕಾರಿಗಳು ಸಂಬಂದಿಸಿದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು.

3. ವಾರ್ಡ್ ನಂ-02ರ ವ್ಯಾಪ್ತಿಯಲ್ಲಿ ಒಂಟಿ ಮನೆಗಳನ್ನು ಪರಿಶೀಲಿಸಿ ಹಂತ ಹಂತವಾಗಿ ಬಿಲ್‌ಗಳನ್ನು ಫಲಾನುಭವಿಗೆ ಪಾವತಿಸುವಂತೆ ಸಭೆಯಲ್ಲಿ ನೊಡೆಲ್ ಅಧಿಕಾರಿಗಳು ಸಂಬಂಧಿಸಿದ ವಾರ್ಡ್‌ನ ಅಭಿಯಂತರರಿಗೆ ತಿಳಿಸಿದರು.

4. ಚೌಡೇಶ್ವರಿ ವಾರ್ಡ್ ನಂ-02ರ ವ್ಯಾಪ್ತಿಯಲ್ಲಿ ನಾಗೇನಹಳ್ಳಿ 2ನೇ ಕ್ರಾಸ್ ಹತ್ತಿರ ಬೀದಿ ದೀಪ ಉರಿಯುತ್ತಿಲ್ಲವೆಂದು ಸಭೆಯಲ್ಲಿ ನಾಗೆನಹಳ್ಳಿ ನಿವಾಸಿಗಳು ಕೋರಿದರು.

5. ಚೌಡೇಶ್ವರಿ ವಾರ್ಡ್ ನಂ-02ರ ವ್ಯಾಪ್ತಿಯ ಪ್ರದೇಶಗಳಲ್ಲಿ ಮಳೆಗಾಲದಲ್ಲಿ ಚರಂಡಿಗಳಲ್ಲಿ ತುಂಬಿರುವ ಹೂಳನ್ನು ತೆಗೆದು ಹಾಗೂ ಮಳೆ ನೀರು ಸರಾಗವಾಗಿ ಚರಂಡಿಗಳಲ್ಲಿ ಹರಿಯುವಂತೆ ಮಾಡಲು ಹಾಗೂ ಶೋಲ್ಡರ್ ಡ್ರೈನ್‌ಗಳನ್ನು ಸ್ವಚ್ಛಗೊಳಿಸುವಂತೆ ನೊಡೆಲ್ ಅಧಿಕಾರಿಗಳು ಸಭೆಯಲ್ಲಿ ಸಂಬಂಧಿಸಿದ ವಾರ್ಡ್‌ನ ಅಭಿಯಂತರರಿಗೆ ತಿಳಿಸಿದರು.

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

9/5/2022

ಕಾರ್ಯದರ್ಶಿಗಳು/ ಸಹಾಯಕ ಅಭಿಯಂತರರು
ವಾರ್ಡ್ ಕಮಿಟಿ, ವಾರ್ಡ್ ನಂ. 02(ಚೌಡೇಶ್ವರಿ)

9/5/2022

ವಾರ್ಡ್‌ನ ನೋಡೆಲ್ ಅಧಿಕಾರಿಗಳು
ವಾರ್ಡ್ ಕಮಿಟಿ, ವಾರ್ಡ್ ನಂ. 02(ಚೌಡೇಶ್ವರಿ)

**ಪ್ರತಿಯನ್ನು:**

ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

## ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.